# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1333(1572)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಕೃಷ್ಣ ಮೇಲ್ದಂಡೆ ಯೋಜನೆಯಲ್ಲಿ ಗ್ರಾಮಗಳ ಸ್ಥಳಾಂತರ ಮತ್ತು ಭೂ ಸ್ವಾಧೀನದ ಬಗ್ಗೆ

(ಅ) ಕೃಷ್ಣ ಮೇಲ್ದಂಡೆ ಯೋಜನೆಯಲ್ಲಿ ಆಲಮಟ್ಟಿ ಅಣೆಕಟ್ಟೆಯ ಎತ್ತರವನ್ನು 519.6 ರಿಂದ 524.256 ಮೀ.ವರೆಗೆ ಏರಿಸಿದಾಗ ಮುಳುಗಡೆಯಾಗುವ ಹಳ್ಳಿಗಳ ಸಂಖ್ಯೆ ಎಷ್ಟು;

(ಆ) ಅಣೆಕಟ್ಟೆಯನ್ನು ಸದರಿ ಎತ್ತರಕ್ಕೆ ಏರಿಸಿದಾಗ ಮುಳುಗಡೆಯಾಗುವ ಹಳ್ಳಿಗಳನ್ನು ಸ್ಥಳಾಂತರಿಸಲು ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕೇಂದ್ರಗಳನ್ನು ಪ್ರಾರಂಭಿಸಲು ಈಗಾಗಲೇ ಎಷ್ಟು ಗ್ರಾಮಗಳಿಗೆ ಜಮೀನುಗಳನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ;

(ಇ) ಇನ್ನೂ ಭೂಸ್ವಾಧೀನ ಪಡಿಸಿಕೊಳ್ಳದೇ ಇರುವ ಗ್ರಾಮಗಳನ್ನು ಸ್ಥಳಾಂತರಿಸುವುದಕ್ಕಾಗಿ ಯಾವ ಕಾಲಮಿತಿಯಲ್ಲಿ ಜಮೀನುಗಳನ್ನು ಭೂ-ಸ್ವಾಧೀನ ಪಡಿಸಿಕೊಳ್ಳಲಾಗುವುದು;

(ಈ) 3ನೇ ಹಂತದ ಯೋಜನೆಯಲ್ಲಿ ಗ್ರಾಮಗಳನ್ನು ಸ್ಥಳಾಂತರಿಸಿ, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕೇಂದ್ರಗಳನ್ನು ಮಾಡುವಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು;

(ಉ) ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕೇಂದ್ರಗಳಿಗಾಗಿ ಭೂ-ಸ್ವಾಧೀನ ಪಡಿಸಿಕೊಂಡ ಸ್ಥಳಗಳಲ್ಲಿ ನಾಗರಿಕ ಸೌಲಭ್ಯಗಳನ್ನು ಒದಗಿಸಲು ಯಾವ-ಯಾವ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ; ಹಾಗೂ ಸದರಿ ಕಾಮಗಾರಿಗಳು ಕಾರ್ಯಾರಂಭವಾಗಿವೆಯೇ; ಹಾಗಿದ್ದಲ್ಲಿ, ಅವುಗಳು ಪ್ರಸ್ತುತ ಯಾವ ಹಂತದಲ್ಲಿದೆ;

(ಊ) ಇನ್ನುಳಿದ ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕೇಂದ್ರಗಳಲ್ಲಿ ಅವಶ್ಯವಿರುವ ನಾಗರಿಕ ಸೌಲಭ್ಯಗಳನ್ನು (ಮೂಲಭೂತ ಸೌಲಭ್ಯಗಳನ್ನು) ಯಾವ ಕಾಲಮಿತಿಯಲ್ಲಿ ಒದಗಿಸಲಾಗುವುದು?